ಅ) ಈ ಜಿಲ್ಲೆಯಲ್ಲಿ ಬಹಳಷ್ಟು ಕಾಮಗಾರಿಗಳು ಪ್ರಗತಿಯಲ್ಲಿದ್ದು ಏಳು ವಿಧಾನ ಸಭಾ ಕ್ಷೇತ್ರದ ಕಾಮಗಾರಿಗಳಿಗೆ ಉದ್ಧ ನಾಯಾಲಯದಲ್ಲಿ ತಡೆಯಾಜ್ಞೆಯಾಗಿದ್ದು ಉಚ್ಚ ನ್ಯಾಯಾಲಯವು ತಡೆಯಾಜ್ಞೆಯನ್ನು ತೆರವು ಮಾಡಿದ ಕೂಡಲೇ ಉಳಿಕೆ ಹಣವನ್ನು ಖರ್ಚು ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಕೆ.ಎಸ್.ಆರ್.ಟಿ.ಸಿ.ಯಲ್ಲಿ ಖಾಲಿ ಇರುವ ಕಂಡಕ್ಟರ್ ಡ್ರೈವರ್ ಹುದ್ದೆಗಳು

585 (515) ಶ್ರೀ ಡಿ.ಎ. ಸದಾನಂದಗೌಡ (ಪುತ್ತೂರು): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸ್ತುತ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಡ್ರೈವರ್, ಕಂಡಕ್ಟರ್, ಮೆಕ್ಯಾನಿಕ್ ಹುದ್ದೆಗಳೆಷ್ಟು;

ಆ) ಇದನ್ನು ತುಂಬುವ ಇರಾದೆ ಸರ್ಕಾರಕ್ಕಿದೆಯೇ; ಇದ್ದರೆ ಯಾವಾಗ ತುಂಬಲಾಗುವುದು?

ಶ್ರೀ ಪಿ.ಜಿ. ಆರ್. ಸಿಂಧ್ಯ (ಸಾರಿಗೆ ಸಚಿವರು):

ಅ) ಪ್ರಸ್ತುತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಚಾಲಕ, ನಿರ್ವಾಹಕ ತಾಂತ್ರಿಕ ಹುದ್ದೆಗಳ ಸಂಖ್ಯೆ ಈ ಕೆಳಗಿನಂತಿರುತ್ತದೆ.

ಹುದ್ದೆ	ಮಂಜೂರಾತಿ	ಕಾರ್ಯನಿರ್ವಹಿಸುತ್ತಿರುವವರು	ಖಾಲಿಹುದ್ದೆಗಳು
ನಿರ್ವಾಹಕ	23238	20828	2410
ಚಾಲಕ	24243	21211	3032
ತಾಂತ್ರಿಕ	15665	12768	2897

ಆ) ಮೇಲ್ಕಾಣಿಸಿದ ಖಾಲಿ ಹುದ್ದೆಗಳು ಸಂಸ್ಥೆಯ ಎಲ್ಲಾ ವಿಭಾಗಗಳಲ್ಲಿ ಲಭ್ಯವಿದ್ದು, ಈಗಾಗಲೇ ಎಲ್ಲಾ ವಿಭಾಗಾಧಿಕಾರಿಗಳಿಗೂ ಖಾಲಿ ಇರುವ ಹುದ್ದೆಗಳಲ್ಲಿ ಶೇಕಡ 75 ರಷ್ಟು ಹುದ್ದೆಗಳನ್ನು ಉದ್ಯೋಗ ವಿನಿಮಯ ಕೇಂದ್ರಗಳಿಂದ ಅರ್ಹ ಅಭ್ಯರ್ಥಿಗಳ ಪಟ್ಟಿ ಪಡೆದು ನೇಮಕಾತಿ ಮಾಡಿಕೊಳ್ಳುವಂತೆ ಆದೇಶಿಸಾಗಿದೆ. ಅದರಂತೆ ಎಲ್ಲಾ ವಿಭಾಗಗಳು ಕಾರ್ಯೋನ್ಮುಖವಾಗಿದ್ದು ಇಷ್ಟರಲ್ಲೇ ನೇಮಕಾತಿ ಮುಗಿಸಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತುಂಬಿಕೊಳ್ಳಲಾಗುವುದು.

ಕೆ.ಎಸ್.ಆರ್.ಟಿ.ಸಿ. ಬಸ್ಸುಗಳ ಸಮರ್ಪಕ ಓಡಾಟ ಮತ್ತು ನಿರ್ವಹಣೆಯ ಬಗ್ಗೆ

586 (516) ಶ್ರೀ ಡಿ.ಎ. ಸದಾನಂದಗೌಡ (ಪುತ್ತೂರು): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?